**ಕರ್ನಾಟಕ ವಿಧಾನ ಪರಿಷತ್ತು**

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **852** |
| **ಮಾನ್ಯ ಸದಸ್ಯರ ಹೆಸರು** | **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರದಿಂದ ಚುನಾಯಿತ)** |
| **ಉತ್ತರಿಸುವ ಸಚಿವರು** | **ಉನ್ನತ ಶಿಕ್ಷಣ ಸಚಿವರು** |
| **ಉತ್ತರಿಸಬೇಕಾದ ದಿನಾಂಕ:** | **24.08.2026** |

| | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ಮತ್ತು ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಸಹಾಯಕ ಪ್ರಾಧ್ಯಾಪಕರು. ಉಪನ್ಯಾಸಕರು ಮತ್ತು ಬೋಧಕೇತರ ಸಿಬ್ಬಂದಿ ಹುದ್ದೆಗಳ ಸಂಖ್ಯೆ ಎಷ್ಟು; ಬೋಧಕರ ಕೊರತೆಯಿಂದ ಶೈಕ್ಷಣಿಕ ಗುಣಮಟ್ಟ ಕುಸಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಹುದ್ದೆಗಳ ಖಾಯಂ ಭರ್ತಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು: | **ಕಾಲೇಜು ಶಿಕ್ಷಣ ಇಲಾಖೆ**<br>ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಮಂಜೂರಾಗಿರುವ, ಭರ್ತಿಯಾಗಿರುವ ಹಾಗೂ ಖಾಲಿ ಇರುವ ಬೋಧಕ (ಸಹಾಯಕ ಪ್ರಾಧ್ಯಾಪಕರು) ಹಾಗೂ ಬೋಧಕೇತರ ಹುದ್ದೆಗಳ ವಿವರಗಳು ಕೆಳಕಂಡಂತಿದೆ.<br><br>ವಿವರ / ಮಂಜೂರಾದ ಹುದ್ದೆ / ಭರ್ತಿ ಹುದ್ದೆ / ಖಾಲಿ ಹುದ್ದೆ<br>ಬೋಧಕ / 7187 / 5971 / 1216<br>ಬೋಧಕೇತರ / 4613 / 1163 / 3450<br><br>ಕಾಲೇಜು ಶಿಕ್ಷಣ ಇಲಾಖೆಯಲ್ಲಿ 2021 ರಲ್ಲಿ ಕೈಗೊಳ್ಳಲಾದ ವಿವಿಧ ವಿಷಯಗಳ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯಲ್ಲಿ ನವೆಂಬರ್ 2024 ರಿಂದ ಇಲ್ಲಿಯವರೆಗೆ ಒಟ್ಟು 1111 ವಿವಿಧ ವಿಷಯಗಳ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಭರ್ತಿ ಮಾಡಲಾಗಿದೆ.<br><br>ಮುಂದುವರೆದು, ಇಲಾಖಾ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಬೋಧಕ ವೃಂದದಲ್ಲಿ ವಿವಿಧ ವಿಷಯಗಳ 826 ಸಹಾಯಕ ಪ್ರಾಧ್ಯಾಪಕರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ಆರ್ಥಿಕ ಇಲಾಖೆಯ ಸಹಮತಿಯೊಂದಿಗೆ ಸರ್ಕಾರದ ಆದೇಶ ಸಂಖ್ಯೆ: ಇಡಿ 75 ಟಿಪಿಸಿ 2025, ದಿನಾಂಕ:04.02.2026 ರಲ್ಲಿ ಅನುಮತಿ ನೀಡಿದ್ದು, ಸದರಿ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಸಂಬಂಧ ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆ) (ಸಹಾಯಕ ಪ್ರಾಧ್ಯಾಪಕರ ನೇಮಕಾತಿ) (ವಿಶೇಷ) ನಿಯಮಗಳು, 2026 ರ ಕರಡು ವಿಶೇಷ ನಿಯಮಗಳನ್ನು ಸಿದ್ಧಪಡಿಸಿ, ನೇಮಕಾತಿ ಪ್ರಾಧಿಕಾರವಾದ ಸರ್ಕಾರದ ಅನುಮೋದನೆಗೆ ಸಲ್ಲಿಸಲಾಗಿದೆ.<br><br>ಮುಂದುವರೆದು, ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ |

ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಖಾಲಿ ಇರುವ ಬೋಧಕರ ಹುದ್ದೆಗಳ ಕೊರತೆ ಹಾಗೂ ವಿದ್ಯಾರ್ಥಿಗಳ ಸಂಖ್ಯೆಗೆ ಲಭ್ಯವಾಗುವ ಹೆಚ್ಚುವರಿ ಕಾರ್ಯಕ್ಕನುಗುಣವಾಗಿ ಅಗತ್ಯವಿರುವ ಬೋಧನಾ ಕಾರ್ಯಕ್ಕನುಗುಣವಾಗಿ ಅಗತ್ಯವಿರುವ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಂಡು ವಿದ್ಯಾರ್ಥಿಗಳ ಪಾಠ-ಪ್ರವಚನಗಳನ್ನು ನಡೆಸಲಾಗುತ್ತಿದೆ.

**ವಿಶ್ವವಿದ್ಯಾಲಯಗಳು:**

ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಸಹಾಯಕ ಪ್ರಾಧ್ಯಾಪಕರು, ಉಪನ್ಯಾಸಕರ ಮಾಹಿತಿಯನ್ನು **ಅನುಬಂಧ-1** ರಲ್ಲಿ ಮತ್ತು ಬೋಧಕೇತರ ಸಿಬ್ಬಂದಿಗಳ ಸಂಖ್ಯೆಯನ್ನು, **ಅನುಬಂಧ-2** ರಲ್ಲಿ ನೀಡಲಾಗಿದೆ.

ಸಾರ್ವಜನಿಕ ವಿಶ್ವವಿದ್ಯಾಲಯದಲ್ಲಿ ಬೋಧಕ ಮತ್ತು ಬೋಧಕೇತರ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನದಲ್ಲಿದ್ದು, ಈ ಹುದ್ದೆಗಳನ್ನು ಹಂತ ಹಂತವಾಗಿ ಭರ್ತಿ ಮಾಡಲು ಅನುವಾಗುವಂತೆ The Statutes Relating to Appointment and Promotion of Teachers and Other Academic Staff and Measures for the Maintenance of Standards in Higher Education as per The UGC Regulations 2018ನ್ನು ಘನತೆವೆತ್ತ ಕುಲಾಧಿಪತಿಗಳ ಅನುಮೋದನೆಯೊಂದಿಗೆ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳಿಗೆ ಏಕರೂಪ ಮಾದರಿ ಪರಿನಿಯಮಗಳನ್ನು ರಚಿಸಲಾಗಿರುತ್ತದೆ. ಬೋಧಕೇತರ ಹುದ್ದೆಗಳಿಗೆ ಸಂಬಂಧಿಸಿದಂತೆ ವಿಶ್ವವಿದ್ಯಾಲಯಗಳು ರಚಿಸಿಕೊಂಡಿರುವ ಪರಿನಿಯಮಗಳನ್ವಯ ನೇಮಕಾತಿ ಮಾಡಿಕೊಳ್ಳಲು ಕ್ರಮವಹಿಸಬೇಕಾಗಿರುತ್ತದೆ.

ಖಾಯಂ ಹುದ್ದೆಗಳ ಭರ್ತಿಯಾಗುವವರೆಗೆ ಶೈಕ್ಷಣಿಕ ಹಿತದೃಷ್ಟಿಯಿಂದ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯ ಅಧಿನಿಯಮ 2000ರ ಪ್ರಕರಣ 55 ಮತ್ತು 56ರಲ್ಲಿ ಪದತ್ತವಾದ ಅಧಿಕಾರದನ್ವಯ ವಿಶ್ವವಿದ್ಯಾಲಯದ ಕುಲಪತಿಗಳು ವಿಶ್ವವಿದ್ಯಾಲಯಕ್ಕೆ ಸರ್ಕಾರದಿಂದ ಮಂಜೂರಾದ ಹುದ್ದೆಗಳಿಗೆ ಎದುರಾಗಿ ಅತಿಥಿ ಉಪನ್ಯಾಸಕರ ಹಾಗೂ ಹೊರಗುತ್ತಿಗೆ ಆಧಾರದ ಮೇಲೆ ಬೋಧಕೇತರ ಸಿಬ್ಬಂದಿಗಳನ್ನು ನೇಮಕ ಮಾಡಿಕೊಂಡು ವಿಶ್ವವಿದ್ಯಾಲಯದ ಶೈಕ್ಷಣಿಕ ಚಟುವಟಿಕೆಗಳನ್ನು ನಡೆಸಲಾಗುತ್ತಿದೆ.

ಮುಂದುವರೆದು, 2026-27ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-121ರಲ್ಲಿ ಈ ಕೆಳಕಂಡಂತೆ ಘೋಷಿಸಲಾಗಿರುತ್ತದೆ.

| | | |
|---|---|---|
| | | **"ಸಾರ್ವಜನಿಕ ವಿಶ್ವವಿದ್ಯಾಲಯಗಳಲಿ 1000 ಬೋಧಕ ಹುದ್ದೆಗಳನ್ನು ತರ್ಕಬದ್ಧಗೊಳಿಸಿ ಹಂತಹಂತವಾಗಿ ಭರ್ತಿ ಮಾಡಲಾಗುವುದು".**<br><br>ಆಯವ್ಯಯ ಭಾಷಣ ಕಂಡಿಕೆಯನ್ವಯ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕಾರ್ಯಭಾರದ ಮಾಹಿತಿಯೊಂದಿಗೆ ಅವಶ್ಯಕವಾಗಿ ಭರ್ತಿ ಮಾಡಬೇಕಾಗಿರುವ ಖಾಲಿ ಹುದ್ದೆಗಳನ್ನು ಗುರುತಿಸಿ ಪ್ರಸ್ತಾವನೆ ಸಲ್ಲಿಸುವಂತೆ ರಾಜ್ಯದ 32 ಸಾರ್ವಜನಿಕ ವಿಶ್ವವಿದ್ಯಾಲಯಗಳ ಕುಲಸಚಿವರುಗಳಿಗೆ ನಿರ್ದೇಶನ ನೀಡಲಾಗಿರುತ್ತದೆ.<br><br>ಅದರಂತೆ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಅವಶ್ಯಕವಾಗಿ ಬೇಕಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿರುತ್ತದೆ. ವಿಶ್ವವಿದ್ಯಾಲಯಗಳಿಂದ ಸ್ವೀಕೃತವಾಗಿರುವ ಪ್ರಸ್ತಾವನೆಯು ಸರ್ಕಾರದ ಹಂತದಲ್ಲಿ ಪರಿಶೀಲಿಸಲಾಗುತ್ತಿದೆ. |
| (ಆ) | ರಾಜ್ಯದ ನೂತನ ಮತ್ತು ಹಳೆಯ ವಿಶ್ವವಿದ್ಯಾಲಯಗಳಲ್ಲಿ ಸುಸಜ್ಜಿತ ಪ್ರಯೋಗಾಲಯಗಳು (Labs) ಗ್ರಂಥಾಲಯಗಳು ಮತ್ತು ಡಿಜಿಟಲ್ ಮೂಲಸೌಕರ್ಯಗಳ ಕೊರತೆ ಇರುವುದು ನಿಜವೇ: | ವಿಶ್ವವಿದ್ಯಾಲಯಗಳಲ್ಲಿ ವಿವಿಧ ವಿಭಾಗಗಳಲ್ಲಿ ಸುಸಜ್ಜಿತವಾದ ಪ್ರಯೋಗಾಲಯ ವ್ಯವಸ್ಥೆ ಮತ್ತು ಗ್ರಂಥಾಲಯ ವ್ಯವಸ್ಥೆ ಕಲ್ಪಿಸಲಾಗಿರುತ್ತದೆ. |
| (ಇ) | ಕಳೆದ ಎರಡು ವರ್ಷಗಳಲ್ಲಿ ವಿಶ್ವವಿದ್ಯಾಲಯಗಳ ಮೌಲಸೌಕರ್ಯ ಅಭಿವೃದ್ಧಿಗೆ ಬಿಡುಗಡೆ ಮಾಡಿದ ಮತ್ತು ಬಳಕೆಯಾದ ಅನುದಾನ ವಿವರಗಳೇನು: | ಕಳೆದ ಎರಡು ವರ್ಷಗಳಲ್ಲಿ ವಿಶ್ವವಿದ್ಯಾಲಯಗಳ ಮೌಲಸೌಕರ್ಯ/ಅಭಿವೃದ್ಧಿಗೆ ಬಿಡುಗಡೆ ಮಾಡಿದ ಅನುದಾನದ ವಿವರವನ್ನು **ಅನುಬಂಧ-3** ದಲ್ಲಿ ಒದಗಿಸಿದ್ದು, ಸಂಪೂರ್ಣ ಅನುದಾನವನ್ನು ಬಳಕೆ ಮಾಡಿಕೊಳ್ಳಲಾಗಿದೆ. |
| (ಈ) | ಕಳೆದ ಕೆಲವು ವರ್ಷಗಳಲ್ಲಿ ಸ್ಥಾಪನೆಯಾದ ನೂತನ ಜಿಲ್ಲಾ ವಿಶ್ವವಿದ್ಯಾಲಯಗಳಿಗೆ ಸ್ವಂತ ಕಟ್ಟಡ ಜಮೀನು ಮತ್ತು ಅಗತ್ಯ ಶೈಕ್ಷಣಿಕ ಪರಕರಗಳನ್ನು ಒದಗಿಸಲು ಸರ್ಕಾರ ರೂಪಿಸಿರುವ ವಿಶೇಷ ಕ್ರಿಯಾ ಯೋಜನೆ ಏನು: | 2022-23ನೇ ಸಾಲಿನ ಆಯವ್ಯಯ ಘೋಷಣೆಯ ಕಂಡಿಕೆ 103ರನ್ವಯ ರಾಜ್ಯದಲ್ಲಿ ನೂತನವಾಗಿ ಈ ಕೆಳಕಂಡ 07 ಹೊಸ ವಿಶ್ವವಿದ್ಯಾಲಯಗಳನ್ನು ಕೆಲವು ಷರತ್ತುಗಳೊಂದಿಗೆ 2023ರಲ್ಲಿ ಈ ಕೆಳಕಂಡ ಷರತ್ತುಗಳೊಂದಿಗೆ ಸ್ಥಾಪನೆ ಮಾಡಲಾಗಿರುತ್ತದೆ.<br><br>• ಈ ವಿಶ್ವವಿದ್ಯಾಲಯಗಳ ಸ್ಥಾಪನೆಗಾಗಿ ಯಾವುದೇ ಜಮೀನನ್ನಾಗಲಿ, ವಾಹನವನ್ನಾಗಿ ಖರೀದಿಸುವಂತಿಲ್ಲ ಹಾಗು ಹೊಸ ಕಟ್ಟಡಗಳನ್ನು ನಿರ್ಮಿಸುವಂತಿಲ್ಲ ಈಗಾಗಲೇ ಮಾತ್ರ ವಿಶ್ವವಿದ್ಯಾಲಯ ಮಂಜೂರಾಗಿರುವ ಹುದ್ದೆಗಳಲ್ಲಿ ಅವಶ್ಯ ಹುದ್ದೆಗಳನ್ನು ಬಳಸಿಕೊಳ್ಳುವುದು ಹಾಗೂ ಯಾವುದೇ ಹೊಸ ಹುದ್ದೆಗಳನ್ನು ಸೃಜಿಸುವಂತಿಲ್ಲ.<br>• ಈ ವಿಶ್ವವಿದ್ಯಾಲಯಗಳು ಸಂಪೂರ್ಣವಾಗಿ Digital Entrepreneurial (ಕೌಶಲ್ಯಾಧಾರಿತ) Earn while you learn" ಮಾದರಿಯಂತೆ ಕಾರ್ಯನಿರ್ವಹಿಸುವುದು. |

| | | |
|---|---|---|
| | | ಈ ವಿಶ್ವವಿದ್ಯಾಲಯಗಳು ಸಾಂಪ್ರದಾಯಿಕ ವಿಶ್ವವಿದ್ಯಾಲಯಗಳಿಗಿಂತ ಭಿನ್ನವಾಗಿ ತಂತ್ರಜ್ಞಾನದ ಗರಿಷ್ಠ ಬಳಕೆಯೊಂದಿಗೆ ಹೆಚ್ಚುವರಿ ಮಾನವ ಸಂಪನ್ಮೂಲ ಉಪಯೋಗಿಸದೇ ಸ್ನಾತಕೋತ್ತರ ಕೇಂದ್ರಗಳಲ್ಲಿ ಲಭ್ಯವಿರುವ ಸಂಪನ್ಮೂಲಗಳನ್ನು ಬಳಸಿಕೊಂಡು ಸ್ನಾತಕೋತ್ತರ ಕೇಂದ್ರಗಳಲ್ಲಿ ಲಭ್ಯವಿರುವ ಸೌಲಭ್ಯಗಳನ್ನು ಬಳಸುವ ಈ ವಿಶ್ವವಿದ್ಯಾಲಯಗಳಿಗೆ ವಾರ್ಷಿಕ ರೂ.2.00 ಕೋಟಿಗಳ ಆವರ್ತಕ ವೆಚ್ಚ ಬಳಸಿ ಕಾರ್ಯನಿರ್ವಹಿಸುತ್ತಿವೆ.<br><br>ಹೊಸ ವಿಶ್ವವಿದ್ಯಾಲಯಗಳನ್ನು ಒಳಗೊಂಡಂತೆ ರಾಜ್ಯದಲ್ಲಿರುವ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಬೋಧಕ/ಬೋಧಕೇತರ ಹುದ್ದೆಗಳು, ಮೂಲಭೂತ ಸೌಕರ್ಯಗಳ ಕೊರತೆಯಿರುವುದು ಸರ್ಕಾರದ ಗಮನದಲ್ಲಿದ್ದು, ಇಂತಹ ಕೊರತೆಗಳನ್ನು ನಿವಾರಿಸಲು ರಾಜ್ಯದಲ್ಲಿರುವ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳ ಆರ್ಥಿಕ ಪರಿಸ್ಥಿತಿಗಳ ಶಿಫಾರಸ್ಸುಗಳನ್ನು ಪರಾಮರ್ಶಿಸಿ ಬಗ್ಗೆ ಮಾಡುವಂತೆ ಸೂಕ್ತ ಸರ್ಕಾರದಿಂದ ಮಾನ್ಯ ಉಪ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪ ಸಮಿತಿಯನ್ನು ರಚಿಸಲಾಗಿದ್ದು, ಸದರಿ ಸಮಿತಿಯು ಆರ್ಥಿಕ ಇಲಾಖೆ ಮತ್ತು ಉನ್ನತ ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ ವಿಶ್ವವಿದ್ಯಾಲಯಗಳ ಸಂಶೋಧನ, ಮೂಲಸೌಲಭ್ಯ ಅನುದಾನ, ಪಿಂಚಣಿ ಹಾಗೂ ಉತ್ತಮ ಗುಣಮಟ್ಟದ ಶಿಕ್ಷಣವನ್ನು ನೀಡಲು ಅನುಕೂಲವಾಗುವಂತೆ ಅಗತ್ಯ ಹುದ್ದೆಗಳ ನೇಮಕಾತಿ ಹಾಗೂ ಇತ್ಯಾದಿ ಅವಶ್ಯಕ ವಿಷಯಗಳ ಕುರಿತು ಹಲವು ಸಭೆಗಳನ್ನು ನಡೆಸಿದ್ದು, ರಾಜ್ಯದ ಸಾರ್ವಜನಿಕ ವಿಶ್ವವಿದ್ಯಾಲಯಗಳನ್ನು ಬಲವರ್ಧನೆಗೊಳಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಿರುತ್ತದೆ. ಪ್ರಸ್ತುತ ಮಂತ್ರಿ ಮಂಡಲವು ಪುನರ್ ರಚನೆಗೊಂಡಿರುವುದರಿಂದ ಸಚಿವ ಸಂಪುಟ ಉಪಸಮಿತಿಯನ್ನು ಪುನರ್ ರಚಿಸುವ ಕುರಿತಂತೆ ಪರಿಶೀಲಿಸಲಾಗುತ್ತಿದೆ. |
| (ಉ) | ಜಾಗತಿಕ ಮಟ್ಟದಲ್ಲಿ ರಾಜ್ಯದ ಪದವೀಧರರ ಸ್ಪರ್ಧಾತ್ಮಕತೆ ಹೆಚ್ಚಿಸಲು, ವಿಶ್ವವಿದ್ಯಾಲಯಗಳಲ್ಲಿ ಸಂಶೋಧನೆಗೆ (Research) ನೀಡುತ್ತಿರುವ ಪ್ರೋತ್ಸಾಹವೇನು: ಕೈಗಾರಿಕಾ ವಲಯದ ಅಗತ್ಯಕ್ಕೆ ತಕ್ಕಂತೆ ಪಠ್ಯಕ್ರಮದ ಸುಧಾರಣೆ (Curriculum Reforms) ಮತ್ತು ಉದ್ಯೋಗ ಆಧಾರಿತ ಕೌಶಲ್ಯಾಭಿವೃದ್ಧಿ ತರಬೇತಿ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಈ ಕುರಿತು ಸಂಪೂರ್ಣ ಮಾಹಿತಿ ನೀಡುವುದು) | ವಿಶ್ವವಿದ್ಯಾಲಯಗಳಲ್ಲಿ ಪದವೀಧರರ ಸ್ಪರ್ಧಾತ್ಮಕತೆ ಹೆಚ್ಚಿಸಲು ಅರ್ಹ ಸಂಶೋಧನೆ ಈ ವಿದ್ಯಾರ್ಥಿಗಳಿಗೆ ಅಗತ್ಯವಿರುವ ಮಾಸಿಕ ವಿದ್ಯಾರ್ಥಿ 5 ವೇತನ ನೀಡಲಾಗುತ್ತಿದೆ. ವಿದ್ಯಾರ್ಥಿಗಳಲ್ಲಿ ತ ಸಂಶೋಧನಾ ಯೋಜನೆಗಳನ್ನು ಕೈಗೊಳ್ಳಲು ವಿವಿಧ 5 ಸರ್ಕಾರಿ ಸಂಸ್ಥೆಗಳು DBT, VGST ಮತ್ತು ವಿಶ್ವವಿದ್ಯಾಲಯದಿಂದ ಆಂತರಿಕ ಧನ ಸಹಾಯ ತ ಒದಗಿಸುತ್ತವೆ. ವಿದ್ಯಾರ್ಥಿಗಳಲ್ಲಿ ಸಂಶೋಧನಾ ಕಾರ್ಯದಲ್ಲಿ ತೊಡಗಿಕೊಳ್ಳಲು ನೆರವಾಗಲು 5 ರಿಂದ 7 ದಿನಗಳ ಕಾಲ Research Methodology Workshop ಗಳನ್ನು ನಡೆಸಲಾಗುತ್ತಿದೆ. ಕೈಗಾರಿಕ ವಲಯದ ಅಗತ್ಯತೆಗೆ ತಕ್ಕಂತೆ |

| | | | |
|---|---|---|---|
| | | | ವಿಶ್ವವಿದ್ಯಾಲಯಗಳಲ್ಲಿ ಕಲಾ, ವಾಣಿಜ್ಯ ಮತ್ತು ವಿಜ್ಞಾನ ನಿಕಾಯದ ವಿದ್ಯಾರ್ಥಿಗಳಿಗೆ Short-term Skill Development ಕೋರ್ಸ್‌ಗಳನ್ನು ಪ್ರಾರಂಭಿಸಲಾಗುತ್ತಿದೆ. |

ಸಂಖ್ಯೆ: ಇಡಿ 112 ಅಲಿವಿ 2026

(ಬಸವರಾಜ ರಾಯರೆಡ್ಡಿ)
ಉನ್ನತ ಶಿಕ್ಷಣ ಸಚಿವರು

**ಅನುಬಂಧ-1**

| ಕ್ರ. ಸಂ | ವಿಶ್ವವಿದ್ಯಾಲಯದ ಹೆಸರು | ಖಾಲಿ ಇರುವ ಬೋಧಕ ಹುದ್ದೆಗಳು | | |
|---|---|---|---|---|
| | | ಪ್ರಾಧ್ಯಾಪಕ | ಸಹ ಪ್ರಾಧ್ಯಾಪಕ | ಸಹಾಯಕ ಪ್ರಾಧ್ಯಾಪಕ |
| 1. | ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು | 46 | 84 | 122 |
| 2. | ಬೆಂಗಳೂರು ನಗರ ವಿಶ್ವವಿದ್ಯಾಲಯ, ಸೆಂಟ್ರಲ್ ಕಾಲೇಜು ಆವರಣ, ಬೆಂಗಳೂರು. | 23 | 45 | 84 |
| 3. | ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, , ಟಮಕ, ಕೋಲಾರ | 10 | 17 | 43 |
| 4. | ಮೈಸೂರು ವಿಶ್ವವಿದ್ಯಾಲಯ, ಮೈಸೂರು | 66 | 90 | 249 |
| 5. | ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ | 44 | 102 | 247 |
| 6. | ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ, ಶಿವಮೊಗ್ಗ | 15 | 18 | 80 |
| 7. | ಗುಲ್ಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ | 24 | 53 | 105 |
| 8. | ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು | 24 | 32 | 104 |
| 9. | ತುಮಕೂರು ವಿಶ್ವವಿದ್ಯಾಲಯ, ತುಮಕೂರು | 15 | 13 | 73 |
| 10. | ಕನ್ನಡ ವಿಶ್ವವಿದ್ಯಾಲಯ, ಹಂಪಿ | 01 | 16 | 21 |
| 11. | ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ | 04 | 09 | 67 |
| 12. | ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ | 16 | 21 | 10 |
| 13. | ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾನಿಲಯ, ಬಳ್ಳಾರಿ, | 17 | 21 | 18 |
| 14. | ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮೈಸೂರು | 07 | 26 | 34 |
| 15. | ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ | 12 | 20 | 15 |
| 16. | ಕರ್ನಾಟಕ ರಾಜ್ಯ ಸಂಸ್ಕೃತ ವಿಶ್ವವಿದ್ಯಾಲಯ, ಬೆಂಗಳೂರು | 08 | 12 | 03 |
| 17. | ಕರ್ನಾಟಕ ರಾಜ್ಯ ಜಾನಪದ ವಿಶ್ವವಿದ್ಯಾಲಯ, ಹಾವೇರಿ | 03 | 06 | 01 |
| 18. | ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ, ಮೈಸೂರು. | 03 | 05 | 07 |

| | | | | |
|---|---|---|---|---|
| 19. | ಮಂಡ್ಯ ವಿಶ್ವವಿದ್ಯಾಲಯ, ಮಂಡ್ಯ | 05 | 16 | 26 |
| 20. | ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ, ರಾಯಚೂರು | 02 | 02 | 24 |
| 21. | ಡಾ. ಬಿ.ಆರ್. ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ಯೂನಿವರ್ಸಿಟಿ, ಬೆಂಗಳೂರು | 02 | 03 | 01 |
| 22. | ಹಾಸನ ವಿಶ್ವವಿದ್ಯಾಲಯ, ಹಾಸನ | 05 | 05 | 17 |
| 23. | ಹಾವೇರಿ ವಿಶ್ವವಿದ್ಯಾಲಯ, ಹಾವೇರಿ | 03 | 17 | 04 |
| 24. | ಕೊಪ್ಪಳ ವಿಶ್ವವಿದ್ಯಾಲಯ, ಕೊಪ್ಪಳ | 02 | 02 | 08 |
| 25 | ಬೀದರ್ ವಿಶ್ವವಿದ್ಯಾಲಯ, ಬೀದರ್ | 04 | 08 | 17 |
| 26. | ಚಾಮರಾಜನಗರ ವಿಶ್ವವಿದ್ಯಾಲಯ, ಚಾಮರಾಜನಗರ | 03 | 09 | 24 |
| 27. | ಕೊಡಗು ವಿಶ್ವವಿದ್ಯಾಲಯ, , ಕೊಡಗು | 04 | 09 | 67 |
| 28. | ಬಾಗಲಕೋಟೆ ವಿಶ್ವವಿದ್ಯಾಲಯ, ಬಾಗಲಕೋಟೆ | 01 | 03 | 05 |
| 29. | ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ | 22 | 36 | 35 |
| 30. | ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು, ವಿಶ್ವವಿದ್ಯಾಲಯ, ಬೆಂಗಳೂರು. | 16 | 30 | 32 |
| 31 | ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ, ಬೆಂಗಳೂರು | ಕಾಲೇಜು ಶಿಕ್ಷಣ ಇಲಾಖೆಯಿಂದ ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯಕ್ಕೆ ಒಟ್ಟು 272 ಬೋಧಕ ಹುದ್ದೆಗಳನ್ನು ವರ್ಗಾಯಿಸಲಾಗಿರುತ್ತದೆ. ಆದರೆ, ಸದರಿ ಹುದ್ದೆಗಳಿಗೆ ವೃಂದ ವಿಂಗಡಣೆಯಾಗಿರುವುದಿಲ್ಲ. | | |
| 32 | ನೃಪತುಂಗ ವಿಶ್ವವಿದ್ಯಾಲಯ, ಬೆಂಗಳೂರು | ಹಿಂದಿನ ಸರ್ಕಾರಿ ವಿಜ್ಞಾನ ಕಾಲೇಜಿಗೆ ಒಟ್ಟು 100 ಬೋಧಕ ಹುದ್ದೆಗಳು ಮಂಜೂರಾಗಿದ್ದು, ಸದರಿ ಬೊಧಕ ಹುದ್ದೆಗಳನ್ನು ನೃಪತುಂಗ ವಿಶ್ವವಿದ್ಯಾಲಯಕ್ಕೆ ಹಸ್ತಾಂತರಿಸಲಾಗಿದ್ದು, Opt-in Opt-out ಪ್ರಕ್ರಿಯೆ ಇನ್ನು ಕೈಗೊಂಡಿರುವುದಿಲ್ಲ. | | |
| **ಒಟ್ಟು** | | **407** | **730** | **1543** |

## ಅನುಬಂಧ-2

| ಕ್ರ. ಸಂ. | ವಿಶ್ವವಿದ್ಯಾಲಯದ ಹೆಸರು | ಖಾಲಿ ಇರುವ ಬೋಧಕೇತರ ಹುದ್ದೆಗಳು |
|---|---|---|
| 01 | ಮೈಸೂರು ವಿಶ್ವವಿದ್ಯಾಲಯ | 396 |
| 02 | ಮಂಡ್ಯ ವಿಶ್ವವಿದ್ಯಾಲಯ | 253 |
| 03 | ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ | 310 |
| 04 | ಗುಲ್ಬರ್ಗಾ ವಿಶ್ವವಿದ್ಯಾಲಯ | 278 |
| 05 | ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ | 169 |
| 06 | ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ | 72 |
| 07 | ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ | 24 |
| 08 | ಕರ್ನಾಟಕ ಜಾನಪದ ವಿಶ್ವವಿದ್ಯಾಲಯ | 18 |
| 09 | ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ | 19 |
| 10 | ಕುವೆಂಪು ವಿಶ್ವವಿದ್ಯಾಲಯ | 366 |
| 11 | ದಾವಣಗೆರೆ ವಿಶ್ವವಿದ್ಯಾಲಯ | 141 |
| 12 | ಮಂಗಳೂರು ವಿಶ್ವವಿದ್ಯಾಲಯ | 374 |
| 13 | ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ | 168 |
| 14 | ಕನ್ನಡ ವಿಶ್ವವಿದ್ಯಾಲಯ, ಹಂಪಿ | 96 |
| 15 | ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ. | 122 |
| 16 | ಕರ್ನಾಟಕ ರಾಜ್ಯ ಅಕ್ಕಮಹಾ ದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ | 163 |
| 17 | ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ | 860 |
| 18 | ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು | 799 |
| 19 | ಬೆಂಗಳೂರು ನಗರ ವಿಶ್ವವಿದ್ಯಾಲಯ, ಬೆಂಗಳೂರು | 117 |
| 20 | ತುಮಕೂರು ವಿಶ್ವವಿದ್ಯಾಲಯ, ತುಮಕೂರು | 168 |
| 21 | ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಟಮಕ, ಕೋಲಾರ. | 90 |
| 22 | ಡಾ. ಬಿ.ಆರ್. ಅಂಬೇಡ್ಕರ್ ವಿಶ್ವವಿದ್ಯಾಲಯ, ಬೆಂಗಳೂರು. | 49 |
| 23 | ನೃಪತುಂಗ ವಿಶ್ವವಿದ್ಯಾಲಯ | 43 |
| 24 | ಹಾಸನ ವಿಶ್ವವಿದ್ಯಾಲಯ | 245 |
| 25 | ಚಾಮರಾಜನಗರ ವಿಶ್ವವಿದ್ಯಾಲಯ | 90 |

| | | |
|---|---|---|
| 26 | ಬೀದರ್ ವಿಶ್ವವಿದ್ಯಾಲಯ | 108 |
| 27 | ಕೊಪ್ಪಳ ವಿಶ್ವವಿದ್ಯಾಲಯ | 34 |
| 28 | ಕೊಡಗು ವಿಶ್ವವಿದ್ಯಾಲಯ | 108 |
| 29 | ಬಾಗಲಕೋಟ ವಿಶ್ವವಿದ್ಯಾಲಯ ಜಮಖಂಡಿ | 51 |
| 30 | ಹಾವೇರಿ ವಿಶ್ವವಿದ್ಯಾಲಯ, ಹಾವೇರಿ | 167 |
| 31 | ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ | 130 |
| 32 | ಯುವಿಸಿಇ ವಿಶ್ವವಿದ್ಯಾಲಯ | 267 |
| **ಒಟ್ಟು** | | **6295** |

**ಅನುಬಂಧ-3**

**<u>ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ಸಾರ್ವಜನಿಕ ವಿಶ್ವವಿದ್ಯಾಲಯಗಳಿಗೆ ಅಭಿವೃದ್ಧಿಗಾಗಿ/ಮೂಲಸೌಕರ್ಯಕ್ಕಾಗಿ ಕಳೆದ ಎರಡು ವರ್ಷಗಳಲ್ಲಿ ಆಯವ್ಯಯದಲ್ಲಿ ಒದಗಿಸಿದ ಮತ್ತು ಬಿಡುಗಡೆ ಮಾಡಿರುವ ಅನುದಾನದ ವಿವರ:</u>**

(ರೂ.ಲಕ್ಷಗಳಲ್ಲಿ)

| ಕ್ರ. ಸಂ | ವಿಶ್ವವಿದ್ಯಾಲಯಗಳು | ಉದ್ದೇಶ | 2024-25 | 2025-26 | ವೆಚ್ಚಗೊಳಿಸಿರುವ ಉದ್ದೇಶ |
|---|---|---|---|---|---|
| 1. | ಕನ್ನಡ ವಿಶ್ವವಿದ್ಯಾಲಯ | ಸಹಾಯಾನುದಾನ ಸಾಮಾನ್ಯ | 391.50 | 391.50 | ವಿಶ್ವವಿದ್ಯಾಲಯದ ಅಭಿವೃದ್ಧಿ ಹಾಗೂ ಬಾಕಿ ವಿದ್ಯುತ್ ಬಿಲ್ ಪಾವತಿಸಲು ಬಳಸಲಾಗಿದೆ. |
| 2. | ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ | ಸಹಾಯಾನುದಾನ ಸಾಮಾನ್ಯ | 100.00 | 100.00 | ಪೀಠೋಪಕರಣ ಖರೀದಿ (Students desks, Racks etc) ಮತ್ತು ಉಪಕರಣಗಳ ಖರೀದಿ ಮಾಡಲಾಗಿದೆ (ಪ್ರಯೋಗಾಲಯದ ಉಪಕರಣಗಳು, ಕಂಪ್ಯೂಟರ್, ಪ್ರೊಜೆಕ್ಟರ್ಸ್, ಇತ್ಯಾದಿ) |
| 3. | ತುಮಕೂರು ವಿಶ್ವವಿದ್ಯಾಲಯ | ಸಹಾಯಾನುದಾನ ಆಸ್ತಿಗಳ ಸೃಜನೆ | 500.00 | 500.00 | ವಿಶ್ವವಿದ್ಯಾನಿಲಯದ ಮೂಲಭೂತ ಸೌಕರ್ಯಕ್ಕಾಗಿ ವೆಚ್ಚ ಮಾಡಲಾಗಿದೆ. |
| 4. | ಜನಪದ ವಿಶ್ವವಿದ್ಯಾಲಯ | ಸಹಾಯಾನುದಾನ ಸಾಮಾನ್ಯ | 76.00 | 38.00 | ವಿಶ್ವವಿದ್ಯಾಲಯವು ತಾತ್ಕಾಲಿಕ ಸಿಬ್ಬಂದಿಗಳ ವೇತನ, ವಿದ್ಯುತ್ ಬಿಲ್, ಸಭೆ ಸಮಾರಂಭಗಳು ಮತ್ತು ಶೈಕ್ಷಣಿಕ ಚಟುವಟಿಕೆಗಳಿಗೆ ವಾಹನಗಳ ನಿರ್ವಹಣೆ ಇತರ ವೆಚ್ಚಗಳಿಗೆ ಬಳಸಲಾಗಿದೆ. |
| 5. | ಸಂಗೀತ ವಿಶ್ವವಿದ್ಯಾಲಯ | ಸಹಾಯಾನುದಾನ ಸಾಮಾನ್ಯ | 100.00 | 100.00 | ವಿಶ್ವವಿದ್ಯಾಲಯ ಹೊರಗುತ್ತಿಗೆ ಸಿಬ್ಬಂದಿಗಳ ವೇತನಕ್ಕಾಗಿ, ಅಭಿವೃದ್ಧಿ ಕಾರ್ಯಗಳಿಗೆ, ಸಾಂಸ್ಕೃತಿಕ ಚಟುವಟಿಕೆಗಳಿಗೆ ಹಾಗೂ ಕಚೇರಿ ಖರ್ಚು ವೆಚ್ಚಗಳಿಗಾಗಿ ಸದರಿ ಅನುದಾನವನ್ನು ಬಳಸಲಾಗಿರುತ್ತದೆ. |
| 6. | ಸಂಸ್ಕೃತ ವಿಶ್ವವಿದ್ಯಾಲಯ | ಸಹಾಯಾನುದಾನ ಆಸ್ತಿಗಳ ಸೃಜನೆ | 100.00 | 200.00 | ಮೂಲಭೂತ ಸೌಲಭ್ಯದ ಉದ್ದೇಶಕ್ಕಾಗಿ ವೆಚ್ಚ ಮಾಡಲಾಗಿದೆ. |
| 7. | ಡಾ\|\| ಬಿ.ಆರ್. ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ | ಸಹಾಯಾನುದಾನ ಆಸ್ತಿಗಳ ಸೃಜನೆ | 164.10 | 100.00 | ಸೌರ ವಿದ್ಯುತ್ ಉತ್ಪಾದನಾ ಘಟಕ ಮತ್ತು ಕಂಪ್ಯೂಟರ್ ಲ್ಯಾಬ್ ಅಭಿವೃದ್ಧಿ, ಬೋಧನಾ ಕೊಠಡಿಗಳ ಮೂಲ ಸೌಕರ್ಯ ಅಭಿವೃದ್ಧಿ, ಅತಿಥಿ ಗೃಹ ಕೊಠಡಿಗಳ ಮೇಲ್ದರ್ಜೆಗೇರಿಸಲು ಬಳಕೆ ಮಾಡಲಾಗಿದೆ. |
| 8. | ನೃಪತುಂಗ ವಿಶ್ವವಿದ್ಯಾಲಯ | ಸಹಾಯಾನುದಾನ ಆಸ್ತಿಗಳ ಸೃಜನೆ | 50.00 | 0.00 | ವಿಶ್ವವಿದ್ಯಾಲಯದ ಅಭಿವೃದ್ಧಿಗೆ ಬಳಸಲಾಗಿದೆ. |
| 9. | ಮಹಾರಾಣಿ ವಿಶ್ವವಿದ್ಯಾಲಯ | ಸಹಾಯಾನುದಾನ ಆಸ್ತಿಗಳ ಸೃಜನೆ | 50.00 | 0.00 | ವಿಶ್ವವಿದ್ಯಾಲಯದ ವಿದ್ಯಾರ್ಥಿನಿಲಯದ ಮೂಲಭೂತ ಸೌಲಭ್ಯಕ್ಕಾಗಿ ಬಳಸಲಾಗಿದೆ. |
| 10. | ರಾಯಚೂರು ವಿ.ವಿ. | ಸಹಾಯಾನುದಾನ ಆಸ್ತಿಗಳ ಸೃಜನೆ | 0.00 | 75.00 | ವಿಶ್ವವಿದ್ಯಾನಿಲಯದ ಆವರಣದಲ್ಲಿ ಮಹಿಳಾ ಸಿಬ್ಬಂದಿ/ವಿದ್ಯಾರ್ಥಿನಿಯರಿಗಾಗಿ ಮೂಲಭೂತ ಸೌಲಭ್ಯವುಳ್ಳ ವಿಶ್ರಾಂತಿ ಗೃಹ ನಿರ್ಮಾಣ ಮಾಡಲಾಗಿದೆ. |
| 11. | ವಿಶ್ವೇಶ್ವರಯ್ಯ ವಿಶ್ವವಿದ್ಯಾಲಯದ ಎಂಜಿನಿಯರಿಂಗ್ ಕಾಲೇಜು (ಯು.ವಿ.ಸಿ.ಇ) | ಸಹಾಯಾನುದಾನ ಆಸ್ತಿಗಳ ಸೃಜನೆ | 1500.00 | 5000.00 | ಅಸ್ತಿತ್ವದಲ್ಲಿರುವ ಕಟ್ಟಡದ ನವೀಕರಣ ಮತ್ತು ದುರಸ್ತಿ, ಪ್ರಯೋಗಾಲಯದ ಉಪಕರಣಗಳು ಮತ್ತು ಗ್ರಂಥಾಲಯದ ಪುಸ್ತಕಗಳ ಖರೀದಿಗಾಗಿ ಮತ್ತು ಹಾಸ್ಟಲ್ ಪೀಠೋಪಕರಣಗಳ ಖರೀದಿಗೆ ಬಳಕೆ ಮಾಡಲಾಗಿದೆ. |